ಬಸವಕಲ್ಯಾಣ ಪುರಸಭೆಯನ್ನು ಮೇಲ್ದರ್ಜೆಗೆ ಏರಿಸುವುದು

2677 (3176) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) :— ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಳೆದ ಜನಗಣತಿಯ ಆಧಾರದ ಮೇಲೆ ಬಸವಕಲ್ಯಾಣ ಪಟ್ಟಣದ ಜನಸಂಖ್ಯೆ ಎಷ್ಟು ;

ಆ) ಜನಗಣತಿಯ ಆಧಾರದ ಮೇಲೆ ಈಗಿರುವ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೆ ಏರಿಸುವುದು ಸರ್ಕಾರದ ಉದ್ದೇಶವಾಗಿದೆಯೇ, ಉದ್ದೇಶಿಸಿದ್ದರೆ ಯಾವಾಗ ಮೇಲ್ದರ್ಜೆಗೆ ಏರಿಸಲಾಗುವುದು?

ಶ್ರೀ ಎಂ. ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು) :—

ಅ) 42,774.

ಆ) 2001ರ ಜನಗಮತಿ ಸಮೀಕ್ಷೆಯ ಅಂಕಿ ಅಂಶಗಳ ಪ್ರಕಟಣೆಯ ನಂತರ ಈ ವಿಷಯವನ್ನು ಪರಿಶೀಲಿಸಲಾಗುವುದು.

ನಗರಸಭೆ, ಪುರಸಭೆ ಪಟ್ಟಣ ಪಂಚಾಯಿತಿಗಳಿಗೆ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಯಾದ ಹಣ

2678 (3179) ಶ್ರೀ ಪಾಟೀಲ್ ಡಿ.ಆರ್. (ಗದಗ) :— ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ನಗರಸಭೆ, ಪುರಸಭೆ ಪಟ್ಟಣ ಪಂಚಾಯಿತಿಗಳಿಗೆ ಅಭಿವೃದ್ಧಿ ಕಾಮಗಾರಿಗಳಿಗಾಗಿ ಕಳೆದ ಮೂರು ವರ್ಷದಲ್ಲಿ ಬಿಡುಗಡೆಯಾಗಿರುವ ಹಣ ಎಷ್ಟು; ನಗರಸಭೆ, ಪುರಸಭೆ ಪಟ್ಟಣ ಪಂಚಾಯಿತಿವಾರು ವಿವರ ನೀಡುವುದು;

ಆ) ಈ ಅಭಿವೃದ್ಧಿ ಹಣ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹಾಗಿಲ್ಲದಿದ್ದಲ್ಲಿ ಆಕ್ಟಾಯ್ ಮರು ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು) :—

ಅ) ರಾಜ್ಯ ಹಣಕಾಸು ಆಯೋಗದ ಅನುದಾನದಿಂದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಅಭಿವೃದ್ಧಿ ಕಾಮಗಾರಿಗಳಿಗಾಗಿ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾಗಿರುವ ಹಣದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಎರಡನೆ ರಾಜ್ಯ ಹಣಕಾಸು ಆಯೋಗವನ್ನು ರಚಿಸಲಾಗಿದ್ದು, ಆಯೋಗವು ಇನ್ನೂ ವರದಿಯನ್ನು ಸಲ್ಲಿಸಿರುವುದಿಲ್ಲ. ವರದಿಯನ್ನು ಸ್ವೀಕರಿಸಿದ ಮೇಲೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಇಲ್ಲ.